ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: Reg. disqualified members of L.A

ಪತ್ರಿಕೆಯ ಹೆಸರು : NAME OF THE NEWS PAPER : Vishwavani

ದಿನಾಂಕ : DATE : 08.11.2019

**ಸಮಾಚಾರ ಸಣ್ಣದಲ್ಲ**

# ಅನರ್ಹ ಶಾಸಕರ ಆರೋಗ್ಯ ಸರಿಯಿಲ್ಲ



**ಬೆಳಗಾವಿ:** ಅನರ್ಹರ ಆರೋಗ್ಯ ಸರಿಯಿಲ್ಲ, ಅವರನ್ನ ತಲೆಗೆ ಸಂಬಂಧಿಸಿದ ವೈದ್ಯರ ಬಳಿ ತೋರಿಸೋದು ಒಳ್ಳೆದು ಎಂದು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅನರ್ಹರಿಗೆ ಟಾಂಗ್ ಕೊಟ್ಟಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ಅನರ್ಹಗೊಂಡ ನಂತರವೂ ಶಾಸಕರು ತಾವು ಅರ್ಹರು ಎಂದು ಹೇಳಿಕೊಳ್ಳುತ್ತಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಸುಪ್ರೀಂ ಕೋರ್ಟಿನಲ್ಲೂ ಅನರ್ಹಗೊಂಡ ನಂತರ ಅರ್ಹರು ಎಂದು ಹೇಳಿಕೊಳ್ಳುತ್ತಿದ್ದಾರೆ. ನಾನು ಯಾರನ್ನೂ ವ್ಯಕ್ತಿಗತವಾಗಿ ಅನರ್ಹಗೊಳಿಸಿಲ್ಲ. ಸಂವಿಧಾನಾತ್ಮಕವಾಗಿ ಅವರನ್ನು ಅನರ್ಹರು ಅಂತ ಘೋಷಣೆ ಮಾಡಿದ್ದೆ. ಸುಪ್ರೀಂ ಸಹ ನನ್ನ ಆದೇಶ ಎತ್ತಿ ಹಿಡಿದಿದೆ. ನಾನು ಕೊಟ್ಟ ತೀರ್ಪು ಸರಿಯೇ ಎಂದು ಪರಿಶೀಲಿಸಿದ್ದೇನೆ. ಜನರು ಕೂಡ ನೀವು ಮಾಡಿದ್ದು ಸರಿಯಾಗಿದೆ ಎಂದಿದ್ದಾರೆ. ಆದರೆ ಕೋರ್ಟ್ ಅನರ್ಹರಿಗೆ ಉಪಚುನಾವಣೆಗೆ ನಿಲ್ಲಲು ಅವಕಾಶ ನೀಡಿದೆ. ಕೋರ್ಟಿನ ತೀರ್ಪನ್ನು ನಾನು ಗೌರವಿಸುತ್ತೇನೆ. ಉಪಚುನಾವಣೆಯಲ್ಲಿ ಜನರು ಅನರ್ಹರಿಗೆ ಉತ್ತರ ನೀಡುತ್ತಾರೆ ಎಂದು ಕಿಡಿಕಾರಿದರು.

2A